2ನೇ ಅಪರ ಮುಖ್ಯ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ಬೆಂಗಳೂರು ನಗರ

ಸಿ.ಸಿ.ನಂಃ 13412ಃ 2019

| | | | |
|---|---|---|---|
| ಸಾಕ್ಷಿದಾರನ ಹೆಸರು | ಶರಣಮ್ಮ ಎಮ್.ಹೆಚ್ | ಸಿ ಡಬ್ಲ್ಯು | 8 |
| ತಂದೆಯ ಹೆಸರು | ವಿನೋದ್ | ಪಿ ಡಬ್ಲ್ಯು | 6 |
| ವಯಸ್ಸು | 34 ವರ್ಷ | | |
| ಉದ್ಯೋಗ | ಪಿ.ಎಸ್.ಐ, ಕೋಣನಕುಂಟೆ ಪಿ.ಎಸ್ | | |
| ವಾಸಸ್ಥಾನ | ಕೋಣನಕುಂಟೆ, ಬೆಂಗಳೂರು | | |

ಪ್ರಮಾಣ ವಚನ ಬೋಧಿಸಿದ ದಿನಾಂಕ ಃ 01.09.2025.

ಮುಖ್ಯ ವಿಚಾರಣೆ ಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ-

ನಾನು ನವೆಂಬರ್ 2017 ರಿಂದ ಜೂನ್ 2021 ರವರೆಗೆ ಜಯನಗರ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸಿದ್ದೇನೆ. ದಿಃ 31.08.2018 ರಂದು ರಾತ್ರಿ 10.00 ಗಂಟೆಗೆ ನಾನು ಠಾಣಾ ಪ್ರಭಾರದಲ್ಲಿದಾಗ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಸ್ವೀಕರಿಸಿ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ದೂರನ್ನು ಈಗಾಗಲೇ ನಿಪಿ-1 ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-1ಬಿ ಎಂದು ಗುರ್ತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿಪಿ-8 ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-8ಎ ಎಂದು ಗುರ್ತಿಸಲಾಯಿತು. 01.09.2018 ರಂದು ಬೆಳಿಗ್ಗೆ 9.30 ಗಂಟೆಗೆ ಕೃತ್ಯ ನಡೆದ ಸ್ಥಳಕ್ಕೆ ಭೇಟಿ ನೀಡಿ ಪಿರ್ಯಾದಿ ಕೃತ್ಯ ನಡೆದ ಸ್ಥಳ ತೋರಿಸಿದ ಮೇರೆಗೆ ಚಾಸಾ-5 ಮತ್ತು 6 ರವರ ಸಮಕ್ಷಮ ಕೃತ್ಯ ನಡೆದ ಸ್ಥಳದ ಪಂಚನಾಮೆಯನ್ನು ಈಗಾಗಲೇ ನಿಪಿ-2 ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ಹಾಗೂ ಅದರಲ್ಲಿರುವ ನನ್ನ ಸಹಿಯನ್ನು ನಿಪಿ-3ಸಿ ಎಂದು ಗುರ್ತಿಸಿದ್ದೇನೆ. ಕೃತ್ಯಕ್ಕೆ ಉಪಯೋಗಿಸಿದ ಹೆಲ್ಮೆಟ್ ಅನ್ನು ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ಎಮ್.ಒ 01 ಎಂದು ಗುರುತಿಸಲಾಗಿರುತ್ತದೆ. ದಿಃ 01.09.2018 ರಂದು ಚಾಸಾ-2 ರಿಂದ 4 ರವರ ಹೇಳಿಕೆಯನ್ನು ಪಡೆದಿರುತ್ತೇನೆ. ಅದೇ ದಿನ ಗಾಯದ ಚಿತ್ರದ ಪೊಟೋವನ್ನು ಚಾಸಾ 1 ರವರು ಹಜಾರುಪಡಿಸಿದ್ದು ಅದನ್ನು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಪೊಟೋವನ್ನು

ಈಗಾಗಲೇ ನಿಪಿ 3 ರಿಂದ 6 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯು 164ರ ಹೇಳಿಕೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 9 ಅದರಲ್ಲಿರುವ ನನ್ನ ಸಹಿಯನ್ನು ನಿಪಿ-9ಎ ಎಂದು ಗುರುತಿಸಲಾಯಿತು. ದಿಃ27.09.2018 ರಂದು ಗಾಯದ ಪ್ರಮಾಣ ಪತ್ರವನ್ನು ಪಡೆದುಕೊಂಡಿರುತ್ತೇನೆ. ಗಾಯದ ಪ್ರಮಾಣ ಪತ್ರವನ್ನು ನಿಪಿ 10 ಅದರಲ್ಲಿರುವ ನನ್ನ ಸಹಿಯನ್ನು ನಿಪಿ-10ಎ ಎಂದು ಗುರುತಿಸಲಾಯಿತು. ಆರೋಪಿತರಿಗೆ ಎರಡು ನೋಟೀಸ್ ನೀಡಿದ್ದು ಆರೋಪಿತರು ಹಾಜರಾಗಿರುವುದಿಲ್ಲ. ನಂತರ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ 9 ರವರಿಗೆ ನೀಡಿರುತ್ತೇನೆ.

ಪಾಟೀ ಸವಾಲುಃ ಆರೋಪಿ ಪರ ಶ್ರೀ ಜಿ.ಐ.ಕೆ ವಕೀಲರಿಂದಃ

ಈ ದೂರನ್ನು ಕೊಡುವ ಪೂರ್ವದಲ್ಲಿ ಚಾಸಾ 1 ರವರು ಯಾವುದೇ ದೂರನ್ನು ನೀಡಿರುವುದಿಲ್ಲ. 29.08.2018 ರಂದು ಚಾಸಾ 1 ರವರು ಬಂದು ದೂರು ಕೊಟ್ಟಿದ್ದಾರೆ ಎಂದರೆ ಸರಿಯಲ್ಲ. ಎಮ್.ಎಲ್.ಸಿ ಆದ ದಿನಾಂಕ 31.08.2018 ಆಗಿರುತ್ತದೆ. ಆಸ್ಪತ್ರೆಯಲ್ಲಿ ಸಾಮಾನ್ಯವಾಗಿ ಒಂದೇ ಎಮ್.ಎಲ್.ಸಿ ಕೊಡುತ್ತಾರೆ ಎಂದರೆ ಸರಿ. ಬೇರೆ ಎಮ್.ಎಲ್.ಸಿ ನನ್ನ ಗಮನಕ್ಕೆ ಬಂದಿರುವುದಿಲ್ಲ. ಪಿರ್ಯಾದಿಯಲ್ಲಿ ಸೈಟ್ ಬಗ್ಗೆ ನಮೂದಾಗಿದ್ದು ಅದರ ಬಗ್ಗೆ ನಾನು ವಿಚಾರ ಮಾಡಿರುವುದಿಲ್ಲ. ಪಿರ್ಯಾದುದಾರರು 28.08.2018 ರಂದು ಚಾಸಾ 1 ರವರು ದೂರು ಕೊಟ್ಟಿದ್ದು ದೂರು ನೊಂದಣಿ ಆಗಿರುವುದಿಲ್ಲ ನಂತರ 31.08.2018 ಕ್ಕೆ ಜಂಟಿ ಕಾರ್ಯದರ್ಶಿ ಕರ್ನಾಟಕ ವೇದಿಕೆ ಎಂದು ನಮೂದು ಮಾಡಿದ್ದರಿಂದ ಹಾಗೂ ಎಮ್.ಎಲ್.ಸಿ ರಿಪೋರ್ಟ್ ಇಲ್ಲದೇ ಇದ್ದರು ಸುಳ್ಳು ದೂರು ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಚಾಸಾ 1 ರವರ ಪ್ರಭಾವದಿಂದ ನಾನು ದೂರು ನೊಂದಾಯಿಸಿದ್ದೇನೆ ಎಂದರೆ ಸರಿಯಲ್ಲ. ದೂರು ದಾಖಲಿಸುವ ಮೊದಲು ನಾನು ಆರೋಪಿಯ ಮನೆಗೆ ಹೋಗಿದ್ದೇನೆ ಎಂದರೆ ಸರಿಯಲ್ಲ. ಆರೋಪಿತರು ಘಟನೆ ನಡೆದಾಗ ಊರಲ್ಲಿ ಇರುವುದಿಲ್ಲ ಮತ್ತು ಆತನ ದಾಖಲೆಗಳನ್ನು ನೋಡಿ ಪರಿಶೀಲನೆ ಮಾಡಿ

ಆರೋಪಿತರನ್ನು ಕಳುಹಿಸಿಕೊಟ್ಟಿದ್ದು ಆದರೆ ಚಾಸಾ 1 ರವರ ಮಾತು ಕೇಳಿ ನಂತರ ಪುನಃ ದೂರು ನೊಂದಣಿ ಮಾಡಿದ್ದೇನೆ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಕರಣ ನೊಂದಣಿ ಮಾಡಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

(ತೆರೆದ ನ್ಯಾಯಾಲಯದಲ್ಲಿ ಗಣಕಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಯಿತು.)

ಓ ಹೇ ಕೇ ಸ ಇದೆ

(ಸಾಹೀಲ್ ಅಹ್ಮದ್ ಎಸ್ ಕುನ್ನಿಭಾವಿ)

2ನೇ ಅ ಮು ನ್ಯಾ ದಂ.